## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ವಿವಿಧ ಜಿಲ್ಲೆಗಳ ವಿಧಾನಸಭಾಕ್ಷೇತ್ರಗಳಲ್ಲಿ ಗ್ರಾಮಗಳನ್ನು ಆಯ್ಕೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:50:ಸುಗ್ರಾಯೋ:2012 ದಿ:20.10.2014

2. ಮಾನ್ಯ ಸಚಿವರ ಟಿಪ್ಪಣಿ ಸಂಖ್ಯೆ:ಗ್ರಾಅಪ/3725/2015-16 ದಿನಾಂಕ 07.01.2016

**ಪ್ರಸ್ತಾವನೆ:**

ಗ್ರಾಮಗಳ ಸಮಗ್ರ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ಎಲ್ಲಾ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಗ್ರಾಮ ವಿಕಾಸ ಯೋಜನೆಯನ್ನು ಅಭಿವೃಧಿಪಡಿಸಲು ಉದ್ದೇಶಿಸಲಾಗಿದೆ. ಸದರಿ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿವರವಾಗಿ ಮೇಲೆ ಓದಲಾದ (1) ರ ಸರ್ಕಾರದ ಆದೇಶವನ್ನು ಹೊರಡಿಸಿ ಮಾರ್ಗಸೂಚಿಯನ್ನು ಹೊರತರಲಾಗಿದೆ. ಅದರನ್ವಯ ಮೇಲೆ ಓದಲಾದ 2 ರಲ್ಲಿ ಗದಗ ಮತ್ತು ತುಮಕೂರು ಜಿಲ್ಲೆಯಲ್ಲಿ 6 ಗ್ರಾಮಗಳನ್ನು ಆಯ್ಕೆ ಮಾಡುವಂತೆ ಗದಗ ಜಿಲ್ಲೆಯ ರೋಣ ಮತ್ತು ನರಗುಂದ ವಿಧಾನಸಭಾ ಕ್ಷೇತ್ರಗಳ ಮಾನ್ಯ ವಿಧಾನಸಭಾ ಸದಸ್ಯರ ಮತ್ತು ತುಮಕೂರು ಜಿಲ್ಲಾ ಮಾನ್ಯ ಉಸ್ತುವಾರಿ ಸಚಿವರ ಕೋರಿಕೆಗಳನ್ನು ಆಧರಿಸಿ ಪ್ರಸ್ತಾವನೆಗೆ ಅನುಮೋದನೆ ನೀಡಲು ಮಾನ್ಯ ಸಚಿವರು ಸೂಚನಾದೇಶ ನೀಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಮಾರ್ಗಸೂಚಿಗಳನ್ವಯ ಪರಿಶೀಲಿಸಿದ್ದು ಪ್ರಸ್ತಾಪಿತ ಗ್ರಾಮಗಳ ಆಯ್ಕೆ ಪಟ್ಟಿಯನ್ನು ಅಧಿಕೃತವಾಗಿ ಹೊರಡಿಸಲು ಸರ್ಕಾರಿ ಆದೇಶದ ಅಗತ್ಯವಿದೆ. ಅನುಬಂಧದಲ್ಲಿರುವ ಗದಗ ಜಿಲ್ಲೆಯ ಗದಗ, ರೋಣ ಮತ್ತು ನರಗುಂದ ಗ್ರಾಮೀಣ ವಿಧಾನಸಭಾ ಕ್ಷೇತ್ರ ಮತ್ತು ತುಮಕೂರು ಜಿಲ್ಲೆಯ ಶಿರಾ ಗ್ರಾಮೀಣ ವಿಧಾನಸಭಾ ಕ್ಷೇತಗಳ ವ್ಯಾಪ್ತಿಯಲ್ಲಿ ಆಯ್ಕೆಯಾದ ಗ್ರಾಮಗಳಲ್ಲಿ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:63:ಗ್ರಾವಿಯೋ:2015. ಬೆಂಗಳೂರು, ದಿನಾಂಕ:16.01.2016**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಗದಗ ಜಿಲ್ಲೆಯ ಗದಗ, ರೋಣ ಮತ್ತು ನರಗುಂದ ಗ್ರಾಮೀಣ ವಿಧಾನಸಭಾ ಕ್ಷೇತ್ರ ಮತ್ತು ತುಮಕೂರು ಜಿಲ್ಲೆಯ ಶಿರಾ ಗ್ರಾಮೀಣ ವಿಧಾನಸಭಾ ಕ್ಷೇತಗಳ ವ್ಯಾಪ್ತಿಯಲ್ಲಿ ಅನುಬಂಧದಲ್ಲಿ ನಮೂದಿಸಿರುವಂತೆ ಸದರಿ ಗ್ರಾಮಗಳಲ್ಲಿ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1. ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಹೊರಡಿಸಲಾದ ಅನುದಾನದ ಮಿತಿಯಂತೆ ಅನುಬಂಧದಲ್ಲಿ ವಿವರಿಸಿರುವಂತೆ ಕ್ರಮ ವಹಿಸುವುದು.

2. ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾರ್ಗಸೂಚಿ ಪುಸ್ತಕದ ಪುಟ ಸಂಖ್ಯೆ 61 ಮತ್ತು 62 ರಲ್ಲಿರುವ ಯೋಜನೆಯ ಅನುಷ್ಠಾನದ ವೇಳಾಪಟ್ಟಿಯಂತೆ ಅನುಷ್ಠಾನಕ್ಕೆ ತಂದು ಎಲ್ಲಾ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾರ್ಗಸೂಚಿಯಲ್ಲಿರುವಂತೆ ಅಕ್ಟೋಬರ್ 2, 2016ರ ಒಳಗಾಗಿ ಮುಕ್ತಾಯಗೊಳಿಸಲು ಕ್ರಮ ಕೈಗೊಳ್ಳುವುದು.

3. ಗ್ರಾಮದಲ್ಲಿ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ಪ್ರದೇಶದ ಅಭಿವೃದ್ಧಿಗೆ ನಿಗದಿಪಡಿಸಿದ ಅನುದಾನವನ್ನು ಮಾರ್ಗಪಲ್ಲಟ ಮಾಡದೆ ಆ ಜನಾಂಗದವರು ವಾಸವಿರುವ ಪ್ರದೇಶದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪ್ರತ್ಯೇಕ ಕ್ರಿಯಾ ಯೋಜನೆಯನ್ನು ತಯಾರಿಸಿಕೊಂಡು ಅನುಷ್ಠಾನಕ್ಕೆ ತರುವುದು.

4. ಗ್ರಾಮ ವಿಕಾಸ ಯೋಜನೆಯ ಅನುದಾನ ಹಾಗೂ ಒಗ್ಗೂಡಿಸಿದ ಕಾರ್ಯಕ್ರಮಗಳ ಅನುದಾನವನ್ನು ಪ್ರತ್ಯೇಕವಾಗಿ ನಿರ್ವಹಿಸುವುದು ಹಾಗೂ ಆಯಾ ಕಾರ್ಯ ಕ್ರಮಗಳ ಅನುದಾನಕ್ಕೆ ಸರ್ಕಾರ ಹೊರಡಿಸಿದ ಆದೇಶ/ ಮಾರ್ಗಸೂಚಿ/ ಸುತ್ತೋಲೆಗಳನ್ವಯ ಅನುಷ್ಠಾನಕ್ಕೆ ತರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/1/16

(ಬೂವನಹಳ್ಳಿನಾಗರಾಜ್)
ನಿರ್ದೇಶಕರು(ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಯನ್ನು:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ ಮತ್ತು ತುಮಕೂರು.
2. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
4. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು (ಗದಗ ಮತ್ತು ತುಮಕೂರು).
5. ಮುಖ್ಯ ಲೆಕ್ಕಾಧಿಕಾರಿ ಮತ್ತು ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಗದಗ ಮತ್ತು ತುಮಕೂರು.
6. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ
8. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
9. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
10. ಸಂಪಾದಕರು, ಕರ್ನಾಟಕ ವಿಕಾಸ, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು
11. ಹೆಚ್ಚುವರಿ.

## ಅನುಬಂಧ

ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:63:ಗ್ರಾವಿಯೋ:2015 ದಿನಾಂಕ 16.01.2016

(ವಿಧಾನಸಭಾ ಕ್ಷೇತ್ರಗಳ ಗ್ರಾಮಗಳ ಆಯ್ಕೆ ಪಟ್ಟಿ)

| ಜಿಲ್ಲೆ | | ವಿಧಾನ ಸಭಾ ಕ್ಷೇತ್ರ | | ಕ್ರ. ಸ | ಗ್ರಾಮಗಳ ಹೆಸರು | ಗ್ರಾಮವಾರು ನಿಗದಿ ಪಡಿಸಿದ ಅನುದಾನ (ರೂ.. ಲಕ್ಷಗಳಲ್ಲಿ) |
|---|---|---|---|---|---|---|
| 1 | ಗದಗ | 1 | ರೋಣ | 1 | ಕಣಗಿನಹಾಳ | 75 |
| | | | | 2 | ಹರ್ಲಾಪುರ | 75 |
| | | 3 | ನರಗುಂದ | 1 | ಸಂಭಾಪುರ | 75 |
| | | | | 2 | ದುಂದೂರು | 75 |
| | | 4 | ಗದಗ | 1 | ಅಸುಂಡಿ | 75 |
| 2 | ತುಮಕೂರು | 1 | ಶಿರಾ | 1 | ಭೂತಕಾಟನಹಳ್ಳಿ | 75 |

16/1/16

(ಬೂವನಹಳ್ಳಿನಾಗರಾಜ್)

ನಿರ್ದೇಶಕರು(ಸುಗ್ರಾಯೋ) ಹಾಗೂ

ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ